RNU AIR DHARWAD

AUGUST 16, 2025

**AKASHAVANI - DHARWAD**

**PRADESH SAMACHARA (KANNADA) 12 PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಬೆಳಗಾವಿ ಜಿಲ್ಲೆಯ 93 ಅಮೃತ ಸರೋವರಗಳ ದಡದಲ್ಲಿ “ಜಲ ಸಂರಕ್ಷಣೆಗಾಗಿ ಒಂದು ಸರೋವರ, ಒಂದು ಸಂಕಲ್ಪ” ಥೀಮ್ ಅಡಿ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಯಿತು. ಜಿಲ್ಲೆಯಲ್ಲಿ ಅನು ್ಠಾನಗೊಂಡ ಅಮೃತ ಸರೋವರಗಳ ದಡದಲ್ಲಿ ಧ್ವಜಾರೋಹಣ ನೆರವೇರಿಸಿದ ಬಳಿಕ ರಾ ್ಟ್ರಗೀತೆಯ ಮೂಲಕ ಗೌರವ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು, ಮಾಜಿ ಸೈನಿಕರು, ಮಹಿಳಾ ಸ್ವಸಹಾಯ ಗುಂಪಿನ ಸದಸ್ಯರು, ಅಮೃತ ಸರೋವರ ಬಳಕೆದಾರರ ಗುಂಪಿನ ಸದಸ್ಯರು, ಅಧಿಕಾರಿಗಳು ಹಾಗೂ ಸಿಬ್ಬಂದಿ ಪಾಲ್ಗೊಂಡಿದ್ದರು.**

<><><>

**ಇಂದು ನಾಡಿನೆಲ್ಲೆಡೆ, ಶ್ರೀಕೃಷ್ಣ ಜನ್ಮಾಷ್ಟಮಿ ಹಬ್ಬವನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಗುತ್ತಿದೆ. ಶ್ರೀಕೃಷ್ಣ ಜನ್ಮಷ್ಟಾಮಿಯಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಸೇರಿದಂತೆ ಗಣ್ಯರು ನಾಡಿನ ಜನತೆಗೆ ಶುಭಾಶಯ ಕೋರಿದ್ದಾರೆ. ತಮ್ಮ ಎಕ್ಸ್ ಖಾತೆಯ ಮೂಲಕ ಶುಭಾಶಯಗಳನ್ನು ತಿಳಿಸಿರುವ ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಅವರು, ಭಗವಾನ್ ಶ್ರೀಕೃಷ್ಣ ಪರಮಾತ್ಮನು ಎಲ್ಲರಿಗೂ ಒಳಿತು ಮಾಡಲಿ, ನಾಡಿನೆಲ್ಲೆಡೆ ಸುಖ, ಶಾಂತಿ, ಸಮೃದ್ಧಿ ನೆಲೆಸುವಂತಾಗಲಿ ಎಂದು ಹಾರೈಸಿದ್ದಾರೆ.**

<><><>

**ಕೇಂದ್ರ ಪುರಸ್ಕೃತ, ಆರ್ಥಿಕ ಹಾಗೂ ಸಾಮಾಜಿಕ ಭದ್ರತಾ ಯೋಜನೆಗಳ ಕುರಿತು, ಜನಸಾಮಾನ್ಯರಿಗೆ ತಿಳಿವಳಿಕೆ ಮೂಡಿಸುವ, ಜನ ಜಾಗೃತಿ ಕಾರ್ಯಕ್ರಮ, ರಾಜ್ಯದ 31 ಜಿಲ್ಲೆಗಳಲ್ಲಿ, ಸೆಪ್ಟೆಂಬರ್ 30 ರ ವರೆಗೆ ಆಯೋಜಿತವಾಗಿದೆ. ಬೆಂಗಳೂರು ದಕ್ಷಿಣ ಜಿಲ್ಲೆ, ಕನಕಪುರ ತಾಲೂಕು, ಐ–ಗೊಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಜರುಗಿದ, ಜನ ಜಾಗೃತಿ ಕಾರ್ಯಕ್ರಮದಲ್ಲಿ, ಪಾಲ್ಗೊಂಡ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಕುಮಾರಸ್ವಾಮಿ ಅವರು ಪ್ರದೇಶ ಸಮಾಚಾರಕ್ಕಾಗಿ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.**

<><><>

ಧ್ವನಿ: ಕುಮಾರಸ್ವಾಮಿ 30 ಸೆಕೆಂದುಗಳು

<><><>

ಮೇಘಾಲಯ ರಾಜ್ಯ ರಾಜಧಾನಿ ಶಿಲ್ಲಾಂಗ್, ರಾಜಭವನದ ಆವರಣದಲ್ಲಿ ಜರುಗಿದ 79 ನೇ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಪದ್ಮಶ್ರೀ ಪುರಸ್ಕೃತ ಕೊಪ್ಪಳ ಜಿಲ್ಲೆ ಭೀಮವ್ವ ಶಿಳ್ಳೆಕ್ಯಾತರ ಕುಟುಂಬವು ಪಾಲ್ಗೊಂಡಿತು. ರಾಜ್ಯಪಾಲರ ವಿಶೇಷ ಆಹ್ವಾನದ ಹಿನ್ನೆಲೆ ತೆರಳಿದ್ದ ಕೇಶಪ್ಪ ಶಿಳ್ಳೆಕ್ಯಾತ, ಪಾಂಡುರಂಗಪ್ಪ ಶಿಳ್ಳೆಕ್ಯಾತ ಹಾಗೂ ಭೀಮಣ್ಣ ಸಿಳ್ಳೆಕ್ಯಾತ ಅವರು ತೊಗಲುಗೊಂಬೆಯಾಟ ಪ್ರದರ್ಶನ ನೀಡಿದರು.

<><><>

ಬೀದರ್ ಜಿಲ್ಲೆಯಲ್ಲಿ 36 ಕೋಟಿ ರೂಪಾಯಿ ವೆಚ್ಚದಲ್ಲಿ, ಕ್ಯಾನ್ಸರ್ ಚಿಕಿತ್ಸಾ ಕೇಂದ್ರ ಆರಂಭಿಸಲಾಗುವುದು, ಕ್ಯಾಥ್ ಲ್ಯಾಬ್ ಗೆ ಹೃದಯ ತಜ್ಞರು ಹಾಗೂ ತಂತ್ರಜ್ಞರನ್ನು ನೇಮಿಸಿ ಶೀಘ್ರದಲ್ಲೇ ಆರಂಭಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಹೇಳಿದರು. ಬೀದರ್ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಿದ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. 48 ಕೋಟಿ ರೂಪಾಯಿ ವೆಚ್ಚದಲ್ಲಿ ಜಿಲ್ಲಾಡಳಿತ ಸಂಕೀರ್ಣ 18 ತಿಂಗಳ ಒಳಗೆ ಪೂರ್ಣಗೊಳ್ಳಲಿದೆ, ಚಿಟಗುಪ್ಪಾ, ಕಮಲನಗರ ಹಾಗೂ ಹುಲಸೂರ ಗಳಲ್ಲಿ ಪ್ರಜಾ ಸೌಧ ನಿರ್ಮಾಣ ಮಾಡಲಾಗುವುದು ಎಂದರು. ಕಾರ್ಯಕ್ರಮದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯಲ್ಲಿ 830 ಜನವಸತಿ ಪ್ರದೇಶಗಳಿಗೆ ಕುಡಿಯುವ ನೀರು ಪೂರೈಸುವ ಜಲಜೀವನ ಮಿಶನ್ ಯೋಜನೆಯನ್ನು ಡಿಸೆಂಬರ್ ತಿಂಗಳ ಒಳಗೆ ಪೂರ್ಣಗೊಳಿಸಲಾಗುವುದು, 739 ಕೋಟಿ ರೂಪಾಯಿ ವೆಚ್ಚದ 9 ಬಹುಗ್ರಾಮ ಕುಡಿಯುವ ನೀರು ಪೂರೈಕೆ ಯೋಜನೆ ಕಾಮಗಾರಿ ಪ್ರಗತಿಯಲ್ಲಿವೆ ಎಂದರು.

<><><>

ಬಳ್ಳಾರಿ ನಗರದ ಏಮ್ಸ್ ಮೈದಾನದಲ್ಲಿ ಜರುಗಿದ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ, ಪೌರಾಡಳಿತ ಖಾತೆ ಸಚಿವ ರಹೀಂ ಖಾನ್ ಅವರು ಸಾಹಿತ್ಯ, ಕ್ರೀಡೆ, ಶಿಕ್ಷಣ ಸೇರಿದಂತೆ ವಿವಿಧ ಕ್ಷೇತ್ರಗಳ ಸಾಧಕರನ್ನು ಸನ್ಮಾನಿಸಿ, ಗೌರವಿಸಿದರು.

<><><>

ಕಳೆದ ಕೆಲವು ದಿನ ಬಿಡುವು ನೀಡಿದ್ದ ಮಳೆ ರಾಜ್ಯದ ಹಲವೆಡೆ ಮತ್ತೆ ಆರಂಭಗೊಂಡಿದೆ. ಎಡೆಬಿಡದೆ ಸುರಿಯುತ್ತಿರುವ ಜಡಿ ಮಳೆಯಿಂದಾಗಿ ಜನಜೀವನ ಬಾಧಿತವಾಗಿದೆ. ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯ ಬಹುತೇಕ ಕಡೆಗಳಲ್ಲಿ ಧಾರಾಕಾರ ಮಳೆಯಾಗುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಕೊಡಗು ಜಿಲ್ಲೆಯಲ್ಲಿ ಈ ವರ್ಷ ಮಳೆಯಿಂದಾಗಿ ಸಂಭವಿಸಿದ ಪ್ರಾಕೃತಿಕ ವಿಕೋಪದಲ್ಲಿ ಮೂವರು ಮೃತಪಟ್ಟಿದ್ದು, 41 ಮನೆಗಳಿಗೆ ಹಾನಿಯಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್. ಬೋಸರಾಜು ತಿಳಿಸಿದ್ದಾರೆ.

<><><>

**ಬೀದರ್, ವಿದ್ಯಾನಗರ ಕಾಲನಿಯಲ್ಲಿ ಮಳೆಯಿಂದ ಹಾನಿಗೊಳಗಾದ ಕಲ್ಪನಾ ಸುನಿಲ್ ಕುಮಾರ ರೆಡ್ಡಿ ಅವರ ಮನೆಗೆ ಭೇಟಿ ನೀಡಿದ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರು, ಹಾನಿಗೊಳಗಾದ ಮನೆಯನ್ನು ಪರಿಶೀಲಿಸಿ, ಕುಟುಂಬದವರಿಗೆ ಸಹಾಯಧನವನ್ನು ಹಸ್ತಾಂತರಿಸಿದರು.**

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>